# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ: | : | 496 |
| ಸದಸ್ಯರ ಹೆಸರು | : | ಶ್ರೀ ನಿರಾಣಿ ಹಣಮಂತ್ ನಿರಾಣಿ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | : | 13.12.2018. |
| ಉತ್ತರಿಸುವ ಸಚಿವರು | : | ಮುಖ್ಯಮಂತ್ರಿಗಳು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಶೈಕ್ಷಣಿಕ ಚಟುವಟಿಕೆಗಳನ್ನು ಹೊರತುಪಡಿಸಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಯ ಶಿಕ್ಷಕರಿಗೆ ಅನ್ಯ ಕರ್ತವ್ಯಗಳಿಗೆ ನಿಯೋಜಿಸಲಾಗುತ್ತಿದೆಯೇ; (ಸಂಪೂರ್ಣ ಮಾಹಿತಿ ನೀಡುವುದು) | ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 300 ಡಿಜಿಡಿ 2011, ದಿನಾಂಕ: 08.11.2011ರಲ್ಲಿ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರು ಮತ್ತು ಮುಖ್ಯ ಶಿಕ್ಷಕರುಗಳನ್ನು ಹಾಗೂ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳು ಮತ್ತು ಪ್ರಾಂಶುಪಾಲರುಗಳನ್ನು ಬೋಧಕೇತರ ಕಾರ್ಯಗಳಿಗೆ/ಕಛೇರಿಗಳಿಗೆ ನಿಯೋಜನೆ ಮಾಡುವುದನ್ನು ಕಡ್ಡಾಯವಾಗಿ ನಿಷೇಧಿಸಲಾಗಿದೆ. |
| ಆ) | ಅನ್ಯ ಕೆಲಸಗಳಿಗೆ ಶಿಕ್ಷಕರನ್ನು ನಿಯೋಜಿಸುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಕುಂಠಿತಗೊಂಡು ಶೈಕ್ಷಣಿಕ ಪ್ರಗತಿ ಕುಸಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಶೈಕ್ಷಣಿಕ ಪ್ರಗತಿ ಕುಸಿದಿರುವುದಿಲ್ಲ. |
| ಇ) | ಹಾಗಿದ್ದಲ್ಲಿ, ಶಿಕ್ಷಕರ ಅನ್ಯ ಕರ್ತವ್ಯ ನಿಯೋಜನೆಯನ್ನು ರದ್ದುಗೊಳಿಸಲು ಮತ್ತು ಅನ್ಯ ಕರ್ತವ್ಯಗಳಿಗೆ ಪರ್ಯಾಯ ಸಿಬ್ಬಂದಿಯನ್ನು ನೇಮಕ ಮಾಡುವುದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? | ಉದ್ಭವಿಸುವುದಿಲ್ಲ. |

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ.

ಸಂಖ್ಯೆ: ಇಡಿ 307 ಎಲ್‌ಬಿಪಿ 2018)